# All India Radio: Bangalore
# National Bulletin In Kannada
# 12.04.2025  13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.04.2025  13.10 p.m.**

**<><><><>**

ಮುಖ್ಯಾಂಶಗಳು

1. ಜಮ್ಮು-ಕಾಶ್ಮೀರದ ಅಖ್ನೂರ್ ಸೆಕ್ಟರ್ ಬಳಿ ಭಯೋತ್ಪಾದಕರ ಒಳನುಸುಳುವಿಕೆ ಯತ್ನ ವಿಫಲಗೊಳಿಸಿದ ಭಾರತೀಯ ಸೇನೆ
2. ಛತ್ರಪತಿ ಶಿವಾಜಿ ಮಹಾರಾಜರ ೩೪೫ನೇ ಪುಣ್ಯಸ್ಮರಣೆ; ರಾಯಗಢ ಕೋಟೆಗೆ ಭೇಟಿ ನೀಡಿದ ಕೇಂದ್ರ ಸಚಿವ ಅಮಿತ್ ಶಾ
3. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಆಸ್ಟ್ರಿಯಾ ಭೇಟಿ; ಅನಿವಾಸಿ ಭಾರತೀಯ ಸಮುದಾಯದೊಂದಿಗೆ ಸಂವಾದ
4. ಐಪಿಎಲ್ ಟಿ-೨೦ ಕ್ರಿಕೆಟ್: ಇಂದು ಲಕ್ನೋ ಸೂಪರ್ ಜೈಂಟ್ಸ್-ಗುಜರಾತ್ ಟೈಟನ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ - ಪಂಜಾಬ್ ಕಿಂಗ್ಸ್ ಮುಖಾಮುಖಿ

<><><><>

ಜಮ್ಮು-ಕಾಶ್ಮೀರದ ಅಖ್ನೂರ್ ಸೆಕ್ಟರ್‌ನಲ್ಲಿ ಗಡಿ ನಿಯಂತ್ರಣ ರೇಖೆ ಬಳಿ ನಿನ್ನೆ ರಾತ್ರಿ ಶಸ್ತ್ರಸಜ್ಜಿತ ಭಯೋತ್ಪಾದಕರ ಗುಂಪಿನ ಒಳನುಸುಳುವಿಕೆ ಯತ್ನವನ್ನು ಭಾರತೀಯ ಸೇನೆ ವಿಫಲಗೊಳಿಸಿದೆ. ಹತ್ತಿರದ ಹೊಳೆ ಬಳಿ ಭಾರತೀಯ ಸೇನೆ, ಭಯೋತ್ಪಾದಕರ ಪತ್ತೆಹಚ್ಚಿ, ಅವರನ್ನು ಪ್ರಶ್ನಿಸಿದರು. ಈ ವೇಳೆ ಭಾರೀ ಗುಂಡಿನ ಚಕಮಕಿ ನಡೆಯಿತು ಎಂದು ಸೇನೆ ತಿಳಿಸಿದೆ. ಎನ್‌ಕೌಂಟರ್ ಕಾರ್ಯಾಚರಣೆ ವೇಳೆ ಭಾರತೀಯ ಸೇನಾಧಿಕಾರಿಯೊಬ್ಬರು ಹುತಾತ್ಮರಾಗಿದ್ದಾರೆ. ಸುತ್ತಮುತ್ತಲಿನ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಹಾಗೂ ಭದ್ರತೆಗೆ ಹೆಚ್ಚಿನ ಸಿಬ್ಬಂದಿ ನಿಯೋಜಿಸಲಾಗಿದೆ. ಗಡಿ ನಿರ್ವಹಣೆಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲು ಭಾರತ - ಪಾಕಿಸ್ತಾನ, ಪೂಂಚ್ ಜಿಲ್ಲೆಯಲ್ಲಿ ಬ್ರಿಗೇಡ್ ಕಮಾಂಡರ್ ಮಟ್ಟದ ಧ್ವಜ ಸಭೆ ನಡೆಸಿದ ಕೇವಲ ಎರಡು ದಿನಗಳ ನಂತರ ಈ ಘಟನೆ ನಡೆದಿದೆ.

<><><><>

ಜಮ್ಮು-ಕಾಶ್ಮೀರದ ಕಿಶ್ತವಾರ್ ಜಿಲ್ಲೆಯ ಛಾತ್ರೂ ಅರಣ್ಯ ಪ್ರದೇಶದಲ್ಲಿ ನಡೆಯುತ್ತಿರುವ ಭದ್ರತಾ ಪಡೆಗಳ ಎನ್‌ಕೌಂಟರ್ ಕಾರ್ಯಾಚರಣೆಯಲ್ಲಿ ಮೂವರು ಭಯೋತ್ಪಾದಕರು ಹತರಾಗಿದ್ದಾರೆ. ಈ ವೇಳೆ ಅಪಾರ ಪ್ರಮಾಣದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಪ್ರದೇಶದಲ್ಲಿ ಭಯೋತ್ಪಾದಕರ ಅನುಮಾನಾಸ್ಪದ ಚಲನವಲನವನ್ನು ಗಮನಿಸಿದ ಭದ್ರತಾ ಪಡೆಗಳ ನಡುವೆ ಬುಧವಾರ ಗುಂಡಿನ ಚಕಮಕಿ ನಡೆದಿತ್ತು. ಮೊದಲಿಗೆ ಭಯೋತ್ಪಾದಕರು ತಪ್ಪಿಸಿಕೊಳ್ಳಲು ಯಶಸ್ವಿಯಾದರು ನಿನ್ನೆ ಅವರನ್ನು ಪತ್ತೆಹಚ್ಚಿ ಪುನಃ ನಡೆಸಿದ ದಾಳಿಯಲ್ಲಿ ಭಯೋತ್ಪಾದಕರು ಹತರಾಗಿದ್ದಾರೆ. ಕಾರ್ಯಾಚರಣೆ ಮತ್ತು ಕಣ್ಗಾವಲಿನ ವ್ಯಾಪ್ತಿಯನ್ನು ಜಮ್ಮು ಪ್ರದೇಶದ ಗುಡ್ಡಗಾಡು ಪ್ರದೇಶಗಳಿಗೆ ವಿಸ್ತರಿಸಲಾಗಿದ್ದು, ಕಾರ್ಯಾಚರಣೆ ಮುಂದುವರಿದಿದೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಮಹಾರಾಷ್ಟ್ರದ ಐತಿಹಾಸಿಕ ರಾಯಗಢ ಕೋಟೆಗೆ ಭೇಟಿ ನೀಡಿ ಛತ್ರಪತಿ ಶಿವಾಜಿ ಮಹಾರಾಜರ ೩೪೫ನೇ ಪುಣ್ಯಸ್ಮರಣೆ ಸಂದರ್ಭದಲ್ಲಿ ಅವರಿಗೆ ಗೌರವ ಸಲ್ಲಿಸಿದರು. ಬಳಿಕ ನಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಛತ್ರಪತಿ ಶಿವಾಜಿ ಮಹಾರಾಜರು ಸ್ವರಾಜ್ಯ ನಿರ್ಮಾಣಕ್ಕೆ ಶ್ರಮವಹಿಸಿದ್ದರು. ಅವರ ದೃಢ ಇಚ್ಛಾಶಕ್ತಿ, ಅದಮ್ಯ ಸಾಹಸ, ಅಕಲ್ಪನೀಯ ರಣನೀತಿ ಹಾಗೂ ಎಲ್ಲಾ ಜಾತಿ, ಧರ್ಮದವರನ್ನು ಒಟ್ಟುಗೂಡಿಸಿ ಒಂದು ಶಕ್ತಿಯಾಗಿ ಪರಿವರ್ತಿಸುವ ಅವರ ನಾಯಕತ್ವದ ಗುಣ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದರು. ಹಲವು ಶಕ್ತಿಗಳ ದಾಳಿಯ ನಡುವೆಯೂ ನಮ್ಮ ಸ್ವಧರ್ಮ, ಭಾಷೆಗಳು, ಸಂಸ್ಕೃತಿ ಇನ್ನೂ ಸುರಕ್ಷಿತವಾಗಿದೆ. ಇಂದು ದೇಶದ ಸ್ವಾತಂತ್ರ್ಯದ ೭೫ನೇ ವರ್ಷದ ಸಂಭ್ರಮಾಚರಣೆಯಲ್ಲಿದ್ದೇವೆ, ಸ್ವಾತಂತ್ರ್ಯ ಹೊಂದಿ ನೂರು ವರ್ಷ ಪೂರೈಸುವ ವೇಳೆ ಭಾರತವನ್ನು ಜಗತ್ತಿನಲ್ಲಿ ಅಗ್ರಸ್ಥಾನದಲ್ಲಿಡುವ ಸಂಕಲ್ಪವನ್ನು ನಾವೆಲ್ಲರೂ ಕೈಗೊಳ್ಳಬೇಕು ಎಂದರು.

ಧ್ವನಿ : ಅಮಿತ್ ಶಾ

ಕೇಂದ್ರ ಸಚಿವರು ಮುಂಬೈನಲ್ಲಿ ಸಂಜೆ ನಡೆಯಲಿರುವ ಗುಜರಾತಿ ಪ್ರಕಾಶನದ ೭೫ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

<><><><>

ಹೆಚ್ಚಿನ ಅನಿವಾಸಿ ಭಾರತೀಯ ಸಮುದಾಯದೊಂದಿಗೆ ಹೆಚ್ಚಿನ ಸಂಪರ್ಕ ಸಾಧಿಸಿ, ಅವರ ಯಶೋಗಾಥೆಗಳ ಕುರಿತು ಪ್ರಶಂಸೆ ವ್ಯಕ್ತಪಡಿಸಲು ಸರ್ಕಾರ ನಿರಂತರವಾಗಿ ಪ್ರಯತ್ನಿಸುತ್ತಿದೆ

ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಆಸ್ಟ್ರೀಯಾ ಪ್ರವಾಸದಲ್ಲಿರುವ ಅವರು, ವಿಯೆನ್ನಾದಲ್ಲಿ ನಿನ್ನೆ ಅನಿವಾಸಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿ, ನವೋದ್ಯಮ, ಫಿನ್‌ಟೆಕ್, ಹಸಿರು ತಂತ್ರಜ್ಞಾನ ಮತ್ತು ಪರಿಸರಸ್ನೇಹಿ ನಗರ ಸಂಚಾರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಭಾರತ ಹಾಗೂ ಆಸ್ಟ್ರಿಯಾದ ಉದ್ಯಮಗಳ ನಡುವೆ ಸಹಯೋಗದ ಸಾಮರ್ಥ್ಯದ ಕುರಿತಂತೆ ಒತ್ತಿ ಹೇಳಿದರು. ತಮ್ಮ ಭೇಟಿಯ ವೇಳೆ ಹಣಕಾಸು ಸಚಿವರು ವಿಯೆನ್ನಾದಲ್ಲಿ ಐರೋಪ್ಯ ವ್ಯವಹಾರಗಳ ಸಚಿವೆ ಬೀಟ್ ಮೈನ್ ರೈಸಿಂಗರ್ ಅವರನ್ನು ಭೇಟಿಯಾದರು. ಸಭೆಯಲ್ಲಿ ಉಭಯ ಸಚಿವರು ಭಾರತ-ಆಸ್ಟ್ರಿಯಾ ದ್ವಿಪಕ್ಷೀಯ ಸಂಬಂಧಗಳ ಪ್ರಗತಿಯ ಪರಿಶೀಲನೆ ನಡೆಸುವ ಜತೆಗೆ ಭಾರತ - ಆಸ್ಟ್ರಿಯಾ ಮತ್ತು ಭಾರತ - ಐರೋಪ್ಯ ಒಕ್ಕೂಟದ ನಡುವಿನ ಸಂಬಂಧಗಳ ಬಲವರ್ಧನೆಗೆ ಬದ್ಧತೆ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಉಭಯ ಸಚಿವರು, ಪರಸ್ಪರ ಹಿತಾಸಕ್ತಿಯ ಜಾಗತಿಕ ವಿಷಯಗಳ ಕುರಿತು ಚರ್ಚಿಸಿ, ನಾವಿನ್ಯತೆ, ಕೃತಕ ಬುದ್ಧಿಮತ್ತೆ, ಮೂಲಸೌಕರ್ಯ, ನವೀಕರಿಸಬಹುದಾದ ಇಂಧನ ಸೇರಿದಂತೆ ಮತ್ತಿತರ ಪ್ರಮುಖ ವಲಯಗಳಲ್ಲಿ ಸಹಕಾರ ಸಂಬಂಧ ಬಲವರ್ಧನೆ ಕುರಿತಂತೆ ಮಾತುಕತೆ ನಡೆಸಿದರು.

<><><>

ಇಂದು ಹನುಮಾನ್ ಜಯಂತಿ ಸಂಭ್ರಮ. ದೇಶಾದ್ಯಂತ ಶ್ರದ್ಧಾ, ಭಕ್ತಿಯಿಂದ ಹನುಮ ಜಯಂತಿ ಆಚರಿಸಲಾಗುತ್ತಿದೆ. ಚೈತ್ರ ಮಾಸ, ಶುಕ್ಲ ಪಕ್ಷದ, ೧೫ನೇ ದಿನವಾದ ಇಂದು ದೇಶದ ಆಂಜನೇಯ ದೇವಾಲಯಗಳಲ್ಲಿ ಹನುಮಾನ್ ಚಾಲಿಸಾ, ಸುಂದರಖಾಂಡ, ಅಖಂಡ ರಾಮಾಯಣ ಪಠಣ ಹಮ್ಮಿಕೊಳ್ಳಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರಿಂದು ದೇಶವಾಸಿಗಳಿಗೆ ಹನುಮಾನ್ ಜಯಂತಿಯ ಶುಭಾಶಯಗಳನ್ನು ಕೋರಿದ್ದಾರೆ. ಸಂಕಟಮೋಚನ ಭಗವಾನ್ ಹನುಮಂತನ ಆಶೀರ್ವಾದದಿಂದ ಜನರ ಜೀವನ, ಆರೋಗ್ಯ, ಸಂತೋಷ ಮತ್ತು ಸಮೃದ್ಧಿಯಿಂದ ಕೂಡಿರಲಿ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಹಾರೈಸಿದ್ದಾರೆ.

<><><>

ಮುಂದಿನ ಐದು ದಿನಗಳಲ್ಲಿ ಕರ್ನಾಟಕ, ತೆಲಂಗಾಣ, ಕರಾವಳಿ ಆಂಧ್ರಪ್ರದೇಶ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ಯಾನಮ್‌ನಲ್ಲಿ ಗುಡುಗು ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇದರ ಜೊತೆಗೆ ಪಶ್ಚಿಮ ರಾಜಸ್ತಾನ, ಗುಜರಾತ್, ಪಂಜಾಬ್ ಮತ್ತು ಹರಿಯಾಣದ ಕೆಲವೆಡೆ ಮುಂದಿನ ನಾಲ್ಕೈದು ದಿನಗಳ

ಕಾಲ ಇದೇ ರೀತಿಯ ವಾತಾವರಣವಿರಲಿದೆ. ಇನ್ನು ಮುಂದಿನ ಮೂರು ದಿನಗಳಲ್ಲಿ ಅಸ್ಸಾಂ ಮತ್ತು ಮೇಘಾಲಯದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಇದರ ಜತೆಗೆ ಪಶ್ಚಿಮಬಂಗಾಳ, ಸಿಕ್ಕಿಂ ಮತ್ತು ಅರುಣಾಚಲಪ್ರದೇಶದಾದ್ಯಂತ ಭಾರೀ ಮಳೆಯಾಗಲಿದ್ದು, ಪೂರ್ವ ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದಲ್ಲಿ ಆಲಿಕಲ್ಲು ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ವಕ್ಫ್ ತಿದ್ದುಪಡಿ ಕಾಯ್ದೆ - ೨೦೨೫ರ ವಿರುದ್ಧ ಪಶ್ಚಿಮಬಂಗಾಳದ ವಿವಿಧ ಭಾಗಗಳಲ್ಲಿ ಪ್ರತಿಭಟನೆಗಳ ಹಿನ್ನೆಲೆ ಪರಿಸ್ಥಿತಿ ಹತೋಟಿಗೆ ತರಲು ಗಡಿ ಭದ್ರತಾ ಪಡೆಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಈ ನಡುವೆ, ಎಸ್‌ಎಸ್‌ಸಿ ಹಗಣರಣದಂತಹ ವಿಷಯಗಳಿಂದ ಸಾರ್ವಜನಿಕರ ಗಮನವನ್ನು ಬೇರೆಡೆ ಸೆಳೆಯಲು ಪಶ್ಚಿಮಬಂಗಾಳ ಸರ್ಕಾರ ವಕ್ಫ್ ಕಾಯ್ದೆ ವಿಷಯ ಬಳಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿ, ಪ್ರತಿಭಟನಾಕಾರರ ಸೋಗಿನಲ್ಲಿ ರಾಜ್ಯಾದ್ಯಂತ ಹಿಂಸಾಚಾರ ಮತ್ತು ಲೂಟಿ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.

<><><>

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆಯನ್ನು ಕಡಿಮೆಮಾಡಿ, ಮತ್ತೊಂದು ಸಂಘರ್ಷಕ್ಕೆ ಎಡೆಮಾಡಿಕೊಡದಿರಲು ಇರಾನ್ ಮತ್ತು ಅಮೆರಿಕ ಒಮನ್‌ನಲ್ಲಿಂದು ನೂತನ ಪರಮಾಣು ಒಪ್ಪಂದ ಕುರಿತಂತೆ ನಿರ್ಣಾಯಕ ಮಾತುಕತೆಗಳನ್ನು ಪ್ರಾರಂಭಿಸಲಿವೆ. ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ, ಇರಾನ್ ನಿಯೋಗದ ನೇತೃತ್ವವಹಿಸಲಿದ್ದರೆ, ಅಮೆರಿಕ ರಾಯಭಾರಿ ಸ್ಟೀವ್ ವಿಟ್ಕಾಫ್, ಅಮೆರಿಕ ನಿಯೋಗದ ನೇತೃತ್ವ ವಹಿಸಲಿದ್ದಾರೆ. ಒಮನ್ ವಿದೇಶಾಂಗ ಸಚಿವ ಬದ್ರ್ ಅಲ್ ಬುಸೈದಿ ಮಧ್ಯವರ್ತಿಯಾಗಿರಲಿದ್ದಾರೆ. ಈ ನಡುವೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ತನ್ನ ಪರಮಾಣು ಯೋಜನೆಯನ್ನು ಸಂಪೂರ್ಣವಾಗಿ ಕೈಬಿಡಲು ಅಥವಾ ಅದರ ವ್ಯಾಪ್ತಿಯನ್ನು ಕಡಿತಗೊಳಿಸುವ ಒಪ್ಪಂದಕ್ಕೆ ಸಮ್ಮತಿ ವ್ಯಕ್ತಪಡಿಸಲು ಇರಾನ್‌ಗೆ ಎರಡು ತಿಂಗಳ ಗಡುವು ನೀಡಿದ್ದಾರೆ.

<><><>

ಅಮೆರಿಕದ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್, ಸೇಂಟ್ ಪೀಟರ್‌ಬರ್ಗ್‌ನಲ್ಲಿ ನಿನ್ನೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭೇಟಿಯಾಗಿ, ಉಕ್ರೇನ್ ಸಂಘರ್ಷದ ಕುರಿತು ಮಾತುಕತೆ ನಡೆಸಿದರು. ರಷ್ಯಾ ಬಿಡುಗಡೆಗೊಳಿಸಿರುವ ಮಾಹಿತಿ ಪ್ರಕಾರ ನಾಲ್ಕು ಗಂಟೆಗಳಿಗೂ ಅಧಿಕ ಕಾಲ

ನಡೆದ ಈ ಸಭೆಯಲ್ಲಿ ಉಕ್ರೇನ್ ಸಂಘರ್ಷ ಕೊನೆಗಾಣಿಸುವುದು ಸೇರಿದಂತೆ ಹಲವು ವಿಷಯಗಳ ಕುರಿತು ವಿಚಾರ ವಿಮರ್ಶೆ ನಡೆದಿದೆ. ಈ ಮಾತುಕತೆಗಳು ಫಲಪ್ರದವಾಗಿದೆ ಎಂದು ರಷ್ಯಾ ವಿಶೇಷ ರಾಯಭಾರಿ ಕಿರಿಲ್ ಡಿಮಿಟ್ರೀವ್ ಹೇಳಿದ್ದಾರೆ. ಈ ಸಭೆ, ರಷ್ಯಾ-ಉಕ್ರೇನ್ ಸಂಘರ್ಷವನ್ನು ಕೊನೆಗಾಣಿಸಲು ಅಮೆರಿಕ ಕೈಗೊಂಡಿರುವ ಪ್ರಯತ್ನಗಳ ಭಾಗವಾಗಿದೆ.

<><><><>

ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಎರಡು ಪಂದ್ಯಗಳು ನಿಗದಿಯಾಗಿದ್ದು, ಉತ್ತರಪ್ರದೇಶದ ಏಕಾನಾ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ. ತೆಲಂಗಾಣದ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಾಟ ನಡೆಸಲಿದ್ದು, ಈ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ೮ ವಿಕೆಟ್‌ಗಳ ಜಯ ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಚೆನ್ನೈ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೦೭ ರನ್ ಗಳಿಸಲಷ್ಟೇ ಶಕ್ತವಾಯಿತು. ಇದಕುತ್ತರವಾಗಿ ಕೋಲ್ಕತ್ತಾ ತಂಡ, ಕೇವಲ ೧೦.೧ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೦೭ ರನ್‌ಗಳಿಸಿ, ಗೆಲುವು ತನ್ನದಾಗಿಸಿಕೊಂಡಿತು.

<><><><>

ಅರ್ಜೆಂಟೀನಾದ ಬ್ಯೂನಸ್ ಐರಿಸ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಶೂಟಿಂಗ್ ಸ್ಪೋರ್ಟ್ಸ್ ಫೆಡರೇಷನ್ - ಐಎಸ್‌ಎಸ್‌ಎಫ್‌ನ ಶೂಟಿಂಗ್ ವಿಶ್ವಕಪ್ ೨೦೨೫ರ ಮೊದಲ ಚರಣದಲ್ಲಿ ಭಾರತ ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ. ೪ ಚಿನ್ನ, ೨ ಬೆಳ್ಳಿ, ೨ ಕಂಚಿನ ಪದಕಗಳೊಂದಿಗೆ ಒಟ್ಟು ೮ ಪದಕಗಳನ್ನು ಭಾರತ ಗಳಿಸಿದೆ. ಸ್ಪರ್ಧೆಯ ಕೊನೆಯ ದಿನ ಭಾರತದ ಸೌರಬ್ ಚೌಧರಿ ಮತ್ತು ಸುರುಚಿ ಸಿಂಗ್ ಜೋಡಿ ಭಾರತದವರೇ ಆದ ಮನು ಭಾಕರ್ ಮತ್ತು ರವೀಂದರ್ ಸಿಂಗ್ ಜೋಡಿಯನ್ನು ೧೬-೮ ಅಂಕಗಳ ಅಂತರದಿಂದ ಮಣಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>